ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್.ವ ಪ್ರಸಿದ್ಧ ಪತ್ರಿಕೆ.

ತಾರೀಖು 19ನೆ ಅಕ್ಟೋಬರ್ 1907.

1. ಕಂದಾಯದ ಬಾಕೀದಾರರಾದ ಹ್ಯಾಕನೂರು ಗ್ರಾಮದ ಗುತ್ತಾದಾರ್‌ರಾದ ಕೆ. ಅಕ್ಷತ್ಯನಾರಾಯಣ ಶಾಸ್ತ್ರಿಗಳಿಂದ ಬರ ಬೇಕಾದ ಜಮೀ ಕಂದಾಯದ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಮೈಸೂರು ಡಿಸ್ಟ್ರಿಕ್ಟ್ ಟಿ. ನರಸೀಪುರದ ತಾ. ಲ್ಲೂಕು ಕಜೇರಿಯಲ್ಲಿ 1908ನೆ ಇಸವಿ ಜನವರಿ ಮಾಹ 30ನೆ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟಿದೆ.

ಹರಾಜು ಆ ದಿವಸ ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡದರಖಾಸ್ತು ದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ. ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪಸೀಲ್ ಮೇರಿಗೆ ರೂಪಾಯಿ 782—11—1 ಆಗಿರುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1906—07ನೆ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕೀ ಮೊಬಲಗು ಹರಾಜ್ ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

3. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಕೇಕಡಾ 25 ರೂಪಾಯಿಗಳನ್ನು ಡಿಪಾಜಿಟ್ಟು ಹಾಜರ್ಮಾಡ

4. ಅಂಥಾ ಡಿಪಾಜಿಟ್ಟು ಮೊಬಲಗು ಸಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕೀ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊಬಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕೀದಾರನಾಗಲೀ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲೀ ಬಾಕಿಯುಳ್ಳಿಬಂದಿರುವ ಪೂರಾ ಕಂದಾಯದ ಜಣವನ್ನೂ, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

6. ಹರಾಜು ಡೆಪ್ಯೂಟಿ ಕಮಿಷನರವರಿಂದಾಗಲಿ ಯಾ ಈ ಭಾಗದಲ್ಲಿ ಅಧಿಕಾರವನ್ನು ಹೊಂದಿದ ಇತರ ಅಧಿಕಾರಿಯಿಂದಾಗಲಿ ಮುಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ

7. ಹರಾಜಿನಲ್ಲಿ ತಗದುಕೊಂಡವರು ಹರಾಜ್ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದಮೇಲೆ ಡೆಪ್ಯೂಟಿ ಕಮಿಷನರ ಇಂದ ಹರಾಜು ಮುಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂಬುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮಿಷನರವರಿಂದ ಸೈ. ಮೊಹರ್ ಮಾಡಲ್ಪಟ್ಟ ಒಂದು ಹರಾಜ್ ಸರಟಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯಾಗಲಿ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟನವರು ಜವಾಬ್ದಾರರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

8. ಹರಾಜಿನಿಂದ ತಪ್ಪಿಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯಿತು 30 ದಿವಸಗಳಲ್ಲಿ ಡೆಪ್ಯೂಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ಹಾಯಿದೆಯಲ್ಲಿ ಮೇಲ್ಪಟ್ಟ ಅಧಿಕಾರಿಗಳಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು :—

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕೀದಾರರ ಹೆಸರು.	ಸ್ವತ್ತಿನ ವಿವರ. ಕಟ್ಟಡಗಳು. ಕಟ್ಟಿದವರ ಹೆಸರು.	ಅಂದಾಜು ಕಿಮ್ಮತ್ತು.	ಜಮೀನು. ನಂಬರ್ ಅಥವಾ ಡಿಸ್ಕ್ರಿಪ್ಷನ್ ಹೆಸರು	ವಿಸ್ತೀರ್ಣ ಅಥವಾ ಬಾಣಾಯಿತ.	ವಿಸ್ತೀರ್ಣ. ಎಕಾರೆ.	ಅಂದಾಜು ಕಿಮ್ಮತ್ತು.	ಸರಕಾರಕ್ಕೂ ಸಲಿಯಬೇಕಾದ ಜಪ್ತೀಕಾದ ಜೋಡಿ ಯಾ ಕಾಯಂಗುತ್ತಾಗಿ ಮೊಬಲಗು.	ಸರಕಾರಕ್ಕೆ ಬರಬೇಕಾದ ನೋಟೀಸ್ ಫೀ ವಗೈರೆ ಸಹಿತವಾದ ಬಾಕಿ ಮೊಬಲಗು.
ಟಿ. ನರಸೀಪುರ	ಮುಯಂಗುಡಾಪ್ಪನವರು	ಹ್ಯಾಕನೂರು	ಗುತ್ತಾದಾರ್ ಕೆ. ಅಕ್ಷತ್ಯನಾರಾಯಣ ಶಾಸ್ತ್ರಿಗಳು			ಗುತ್ತಾ ...			ರೂ. ಆ. ಪೈ. 1,161 13 0	ರೂ. ಆ. ಪೈ. ಭೂ ಕಂ. 1 0
						ಲೋಕಲ್ ...			6 0 9	
						ಸಾಬ್ಬು ಬೇರೀಜು ಕ್ವಿಟ್‌ರೆಂಟ್. ...			0 3 0	
									1,238 0 9	ಭೂ ಕಂ. 11 8 0
						ಗ್ರಾಮ ಪುರ್ತಾ ...		ರೂ. ಆ. ಪೈ. 1,598 6 6	ರೂ. 2,500 0 0	ರೂ. 782 1 1

ಹರಾಜು ತಾರೀಖಿನ ವರಗೆ ಬಡ್ಡಿ.

ಎಂ. ಕಾಂತರಾಜೆ ಅರಸ್, ಡೆಪ್ಯೂಟಿ ಕಮಿಷನರ್.

ಚಿತ್ರದುರ್ಗ ಡಿಸ್ಟ್ರಿಕ್ಟ್.

ತಾರೀಖು 19ನೆ ನವೆಂಬರ್ 1907, ಚಿತ್ರದುರ್ಗ.

ಚಿತ್ರದುರ್ಗ ಡಿಸ್ಟ್ರಿಕ್ಟ್ ಚಳ್ಳಕೆರೆ ತಾಲ್ಲೂಕು ವಿಜಾಸಾಬಿಹಳ್ಳಿ ಗ್ರಾಮದಲ್ಲಿ ಹೊಸದಾಗಿ ಕಟ್ಟಿ ಇರುವ ರಾಣಿತಲಾವ್‌ಕೆರೆ ಅಚ್ಚಕಟ್ಟಿಗೆ ಸೇರಿ ಇರುವ ಇದರಡಿ ಕಂಡ ಜವಿನಾರುಗಳ ಹಂಪುವಳಿ ಹಕ್ಕನ್ನು ವಿಜಾಸಾಬಿಹಳ್ಳಿ ಗ್ರಾಮದಲ್ಲಿ ಚಿತ್ರದುರ್ಗದ ಸಬ್ ಡಿವೀಜ್ ಫಾರ್ಜಿನಲ್ಲಿ ಇರುವ ಅಸಿಸ್ಟೆಂಟ್ ಕಮಿಷರ್‌ರವರಿಂದ ಬಹಿರಂಗವಾಗಿ ಹರಾಜು ಮಾಡಿಸಲ್ಪಡುತ್ತೆ ಎಂದು ಇದರ ಮೂಲಕ ನೋಟೀಸನ್ನು ಕೊಟ್ಟಿರುತ್ತದೆ. ಈ ಹರಾಜು ಸ ಈ 1908ನೆ ಇಸವಿ ಜನವರಿ ತಾರೀಖು 6ನೆ ಸೋಮವಾರದ ದಿನ ಮತ್ತು ಮುಂದಿವಸಗಳಲ್ಲಿ ಪ್ರಾರಂಭವಾಗಿ 11 ಘಂಟೆಗೆ ಶುರುಮಾಡಿ ಅದರಾನ್ನಂ 5 ಘಂಟೆಗೆ ಕೈದು ಮಾಡಲ್ಪಡುತ್ತೆ.—

ಚಿತ್ರದುರ್ಗದ ಸಬ್ ಡಿವೀಜ್ ಫಾರ್ಜಿನಲ್ಲಿರುವ ಅಸಿಸ್ಟೆಂಟ್ ಕಮಿಷರ್‌ರವರಿಂದ ರುಜು ಮಾಡಲ್ಪಟ್ಟ ಹರಾಜಿನ ಬರಹ ಮೂ